**ವಿಧಾನ ಪರಿಷತ್ ಸದಸ್ಯರಾದ ಮಾನ್ಯ ಶ್ರೀ ಮರಿತಿಬ್ಬೇಗೌಡ ಇವರು ಮಂಡಿಸಿರುವ ನಿಯಮ 330-ಎ ಗೆ ಉತ್ತರಿಸುವ ಬಗ್ಗೆ.**

**ವಿಷಯ:-**

**ದಿನಾಂಕ:20.07.2023 ರಂದು ಸಂಯುಕ್ತ ಕರ್ನಾಟಕ ದಿನಪತ್ರಿಕೆಯಲ್ಲಿ ಕನಿಷ್ಟ ವೇತನಕ್ಕೆ ಆಗ್ರಹಿಸಿ ಅತಿಥಿ ಶಿಕ್ಷಕರ ಧರಣಿ ಎಂಬ ಶೀರ್ಷಿಕೆಯಡಿಯಲ್ಲಿ ವರದಿಯಾದಂತೆ ವಿವಿಧ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ನಗರ ಸ್ವಾತಂತ್ರ್ಯ ಉದ್ಯಾನದಲ್ಲಿ ಪ್ರಾಥಮಿಕ ಹಾಗೂ ಪ್ರೌಢಶಾಲಾ ಅತಿಥಿ ಶಿಕ್ಷಕರು ಬುಧವಾರ ಧರಣಿ ನಡೆಸಿದ್ದಾರೆ.**

**ರಾಜ್ಯದಲ್ಲಿ 33,159 ಮಂದಿ ಅತಿಥಿ ಶಿಕ್ಷಕರು ಸೇವೆ ಸಲ್ಲಿಸುತ್ತಿದ್ದು, ಸರ್ಕಾರ ಇದುವರೆಗೆ ಇವರಿಗೆ ಸೌಲಭ್ಯಗಳನ್ನು ನೀಡಿಲ್ಲ, ಕೇವಲ 10 ಅಥವಾ 11 ಸಾವಿರಕ್ಕೆ ಸೇವೆ ಸಲ್ಲಿಸುತ್ತಿದ್ದಾರೆ. ಅಲ್ಲದೇ ಪ್ರತಿ ವರ್ಷ ಇವರನ್ನು ಹುದ್ದೆಯಿಂದ ಬಿಡುಗಡೆಗೊಳಿಸಲಾಗುತ್ತಿದೆ. ಬಿಡುಗಡೆಗೊಂಡ ನಂತರ ಕೆಲಸಕ್ಕಾಗಿ ಅಲೆಯಬೇಕಾಗಿದೆ.**

**ಆದ್ದರಿಂದ ಸರ್ಕಾರ ಇವರುಗಳಿಗೆ ಸೇವಾ ಭದ್ರತೆ, ಸಮಾನ ಕೆಲಸಕ್ಕೆ ಸಮಾನ ವೇತನ ಒದಗಿಸಿ ನಿಗದಿತ ಸಮಯಕ್ಕೆ ವೇತನವನ್ನು ಕೂಡ ಒದಗಿಸುವಂತೆ ಪ್ರಸ್ತಾವಿಸಲಾಗಿದೆ.**

**ಉತ್ತರ:**

1) ರಾಜ್ಯದಲ್ಲಿರುವ ಸರ್ಕಾರಿ ಪ್ರಾಥಮಿಕ/ಪ್ರೌಢಶಾಲೆಗಳಲ್ಲಿ ಖಾಲಿ ಇರುವ ಬೋಧಕ ಹುದ್ದೆಗಳಿಗೆದುರಾಗಿ ಅತಿಥಿ ಶಿಕ್ಷಕರನ್ನು ನೇಮಕ ಮಾಡಲಾಗಿದೆ.
2) ಪ್ರಾಥಮಿಕ ಶಾಲಾ ಅತಿಥಿ ಶಿಕ್ಷಕರ ಗೌರವ ಸಂಭಾವನೆಯನ್ನು ರೂ.7,500/- ರಿಂದ ರೂ.10,000/ಗಳಿಗೆ ಹಾಗೂ ಪ್ರೌಢಶಾಲಾ ಅತಿಥಿ ಶಿಕ್ಷಕರ ಸಂಭಾವನೆಯನ್ನು ರೂ.8,000/- ಗಳಿಂದ ರೂ.10,500/-ಗಳಿಗೆ ಪರಿಷ್ಕರಿಸಲಾಗಿದೆ.
3) ನೇಮಕಾತಿಯಾದ ಕೂಡಲೇ ನೇಮಕಗೊಂಡ ಅತಿಥಿ ಶಿಕ್ಷಕರ ಬ್ಯಾಂಕ್ ಅಕೌಂಟ್ ಮಾಹಿತಿ ಪಡೆದು ಅತಿಥಿ ಶಿಕ್ಷಕರಿಗೆ ನಿರ್ದಿಷ್ಟ ಅವಧಿಗೆ ಗೌರವ ಸಂಭಾವನ ಪಾವತಿಸಲಾಗುತ್ತಿದೆ.
4) ವೃಂದ ಮತ್ತು ನೇಮಕಾತಿ ನಿಯಮಗಳಲ್ಲಿ ನಿಗಧಿಪಡಿಸಿರುವಂತೆ ಸಂಯುಕ್ತ ಸ್ಪರ್ದಾತ್ಮಕ ಪರೀಕ್ಷೆಯಲ್ಲಿ ತೇರ್ಗಡೆ ಹೊಂದಿ ಅರ್ಹರಾಗುವ ಅಭ್ಯರ್ಥಿಗಳನ್ನು ಮಾತ್ರ ನೇರ ನೇಮಕಾತಿ ಮೂಲಕ ಭರ್ತಿ ಮಾಡಿಕೊಳ್ಳಲಾಗುತ್ತಿದೆ. ನೇರ ನೇಮಕಾತಿಯಿಂದ ಭರ್ತಿ ಮಾಡುವವರಗೆ ಅಥವಾ ಶೈಕ್ಷಣಿಕ ವರ್ಷದ ಅಂತ್ಯದವರೆಗೆ ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷಿಯಿಂದ ಮಾತ್ರ ಅತಿಥಿ ಶಿಕ್ಷಕರನ್ನು ತಾತ್ಕಾಲಿಕವಾಗಿ ನೇಮಕ ಮಾಡಿಕೊಳ್ಳಲಾಗುತ್ತದೆ.
5) ಅತಿಥಿ ಶಿಕ್ಷಕರುಗಳನ್ನು ಖಾಯಂಗೊಳಿಸಲು ಹಾಗೂ ಸೇವಾ ಭದ್ರತೆ ನೀಡಲು ನಿಯಮಗಳಲ್ಲಿ ಅವಕಾಶವಿರುವುದಿಲ್ಲ. ಅತಿಥಿ ಶಿಕ್ಷಕರನ್ನು ಶೈಕ್ಷಣಿಕ ವರ್ಷದ ಅಂತ್ಯದವರೆಗೆ ಅಥವಾ ಖಾಯಂ ಶಿಕ್ಷಕರು ನೇರ ನೇಮಕಾತಿಯಿಂದ / ವರ್ಗಾವಣೆಯಿಂದ ಭರ್ತಿಯಾಗುವವರೆಗೂ ಯಾವುದು ಮೊದಲು ಅಲ್ಲಿಯವರೆಗೆ ತಾತ್ಕಾಲಿಕವಾಗಿ ಮಾತ್ರ ಅತಿಥಿ ಶಿಕ್ಷಕರನ್ನು ನೇಮಕಾತಿ ಮಾಡಿಕೊಳ್ಳಲಾಗುತ್ತಿದೆ.

**ಸಂಖ್ಯೆ: ಇಪಿ 305 ಎಸ್‌ಇಎಸ್ 2023**

**(ಎಸ್.ಮಧುಬಂಗಾರಪ್ಪ)**
**ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖಾ ಸಚಿವರು**